**ಕರ್ನಾಟಕ ಸರ್ಕಾರ**

ಸಂಖ್ಯೆ:ಎ.ಎಲ್.ಎನ್[ವ-2]ಪಿ]ಎಸ್‌ಆರ್/136/2016-17.

ಜಿಲ್ಲಾಧಿಕಾರಿಗಳ ಕಾರ್ಯಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು ದಿನಾಂಕ: 26-07-2017.

: : **ಅಧಿಕೃತ ಜ್ಞಾಪನ** : :

**ವಿಷಯ:** ಬೆಂಗಳೂರು ಜಿಲ್ಲೆ, **ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಮುಳ್ಳೂರು ಗ್ರಾಮದ ಸ.ನಂ.34/2ಎರಲ್ಲಿ 0-28 ಗುಂಟೆ & 0-30 ಗುಂಟೆ, ಮತ್ತು ಸ.ನಂ.34/2ಬಿ1 ರಲ್ಲಿ 1-04 ಎ/ಗು ಒಟ್ಟು 2-22 ಎ/ಗು** ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ **ವಾಸದ** ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ **ಶ್ರೀ.ಬಸವರೆಡ್ಡಿ ಬಿನ್ ಲೇ.ವೆಂಕಟರಮಣಪ್ಪ, ನಂ.1286, 17ನೇ ಅಡ್ಡರಸ್ತೆ, 5ನೇ ಮುಖ್ಯರಸ್ತೆ. ಸಿಂಡಿಕೇಟ್ ಬ್ಯಾಂಕ್ ಹತ್ತಿರ, ಹೆಚ್.ಎಸ್.ಆರ್.ಲೇಔಟ್ ಸೆಕ್ಟರ್-7, ಬೆಂಗಳೂರು ದಕ್ಷಿಣ, ಬೆಂಗಳೂರು-560102** ರವರು ಸಲ್ಲಿಸಿರುವ ಅರ್ಜಿ ದಿನಾಂಕ: 17-02-2017.

**ಉಲ್ಲೇಖ:**
1] ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ:7:ಎಲ್‌ಜಿಪಿ:95 ದಿನಾಂಕ: 07-06-1999.
2] ಸರ್ಕಾರದ ಸುತ್ತೋಲೆ ಪತ್ರದ ಸಂಖ್ಯೆ:ಆರ್.ಡಿ:56:ಎಲ್‌ಜಿಪಿ:2008, ದಿನಾಂಕ: 10-9-2008 ಮತ್ತು 24-9-2008.
3] ತಹಶೀಲ್ದಾರ್, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ರವರ ವರದಿ ಸಂಖ್ಯೆ:ಎಎಲ್‌ಎನ್(ಪ)ಸಿಆರ್/116/2016-17, ದಿನಾಂಕ: 11-05-2017.
4] ಭೂ ಪರಿವರ್ತನಾ ಶುಲ್ಕ ರೂ.1,38,848/-, ಹಾಗೂ ಪೋಡಿ ಶುಲ್ಕ ರೂ.110/-, ಒಟ್ಟು ರೂ.1,38,958/-ಗಳನ್ನು ಚಲನ್ ಸಂಖ್ಯೆ.21 ಮತ್ತು 23 ರಂತೆ, ದಿನಾಂಕ: 24-07-2017 ರಂದು ಎಸ್.ಬಿ.ಐ.ಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.
5] ಸಹಾಯಕ ಕಾರ್ಯಪಾಲಕ ಅಭಿಯಂತರರು, ನಗರ ಯೋಜನಾ ವಿಭಾಗ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರವರ ಪತ್ರ ಸಂ:ಬೆಂಅಪ್ರಾ/ನಯೋಸ/CON-161/178/2017-18, ದಿನಾಂಕ:29-05-2017 ಮತ್ತು ಉಪ ಆಯುಕ್ತರು (ಭೂಸ್ವಾ), ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರವರ ಪತ್ರಸಂಖ್ಯೆ:ಬೆಂಅಪ್ರಾ/ಉಪ(ಭೂಸ್ವಾ)/156/2017-18, ದಿನಾಂಕ:27-05-17.
6] ವಿಶೇಷ ಭೂಸ್ವಾಧೀನಾಧಿಕಾರಿಗಳು, ಪೋಡಿಯಂ ಬ್ಲಾಕ್, ಬೆಂಗಳೂರು ರವರ ಪತ್ರ ಸಂಖ್ಯೆ:ಎಸ್‌ಎಲ್‌ಎಒ/ಎಎಲ್‌ಎನ್/287/2017-18, ದಿನಾಂಕ: 06-06-2017.
7] ವಿಶೇಷ ಭೂಸ್ವಾಧೀನಾಧಿಕಾರಿಗಳು-2, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ, ಬೆಂಗಳೂರು ರವರ ಪತ್ರ ಸಂಖ್ಯೆ:ಬೆಂಗಳೂರು/ವಿಭೂಸ್ವಾಅ-2/583/2017-18, ದಿನಾಂಕ: 23-05-2017.

*******

ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ ಕಲಂ.95(2), 95(4) ಮತ್ತು 95(7)ರ ಷರತ್ತುಗಳು ಹಾಗೂ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ, ಕರ್ನಾಟಕ ಭೂ ಕಂದಾಯ(ತಿದ್ದುಪಡಿ) ನಿಯಮಗಳು 1994ರ ನಿಯಮ 107(1)ರಂತೆ ವಾಸದ ಉದ್ದೇಶಕ್ಕೆ ಎಕರೆ ಒಂದಕ್ಕೆ ರೂ.54,450,-00 (ಐವತ್ತನಾಲ್ಕು ಸಾವಿರದ ನಾಲ್ಕು ನೂರ ಐವತ್ತು ರೂ. ಮಾತ್ರ)ಗಳಂತೆ, ಅರ್ಜಿದಾರರುಗಳು ಉಲ್ಲೇಖ(4)ರಲ್ಲಿ ನಮೂದಿಸಿರುವಂತೆ, ಹಣವನ್ನು ಜಮಾ ಮಾಡಿದ ಮೇರೆಗೆ ಅರ್ಜಿದಾರರಾದ **ಶ್ರೀ.ಬಸವರೆಡ್ಡಿ ಬಿನ್ ಲೇ.ವೆಂಕಟರಮಣಪ್ಪ, ನಂ.1286, 17ನೇ ಅಡ್ಡರಸ್ತೆ, 5ನೇ ಮುಖ್ಯರಸ್ತೆ, ಸಿಂಡಿಕೇಟ್ ಬ್ಯಾಂಕ್ ಹತ್ತಿರ, ಹೆಚ್.ಎಸ್.ಆರ್.ಲೇಔಟ್ ಸೆಕ್ಟರ್-7, ಬೆಂಗಳೂರು ದಕ್ಷಿಣ, ಬೆಂಗಳೂರು-560102** ರವರುಗಳ ಅರ್ಜಿಯನ್ನು ಪರಿಗಣಿಸಿ, **ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಮುಳ್ಳೂರು ಗ್ರಾಮದ ಸ.ನಂ.34/2ಎರಲ್ಲಿ 0-28 ಗುಂಟೆ & 0-30 ಗುಂಟೆ, ಮತ್ತು ಸ.ನಂ.34/2ಬಿ1 ರಲ್ಲಿ 1-04 ಎ/ಗು ಒಟ್ಟು 2-22 ಎ/ಗು** ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ **ವಾಸದ** ಉದ್ದೇಶಕ್ಕಾಗಿ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರಿಯಿಂದ ಅಂದರೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿಎಂಆರ್‌ಡಿಎ (ಸ್ಥಳೀಯ ಯೋಜನಾ ಪ್ರಾಧಿಕಾರ) ಬಿ.ಎಂ.ಐ.ಸಿ.ಎ.ಪಿ.ಎ/ಮಾಲಿನ್ಯ ನಿಯಂತ್ರಣ ಮಂಡಳಿ ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.
2. ಈ ಪರಿವರ್ತಿತ ಜಮೀನನ್ನು ವ್ಯವಸಾಯೇತರ **ವಾಸದ** ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೆ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.

- - - 2)

3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿಐಎಪಿಎ/ಬಿಬಿಎಂಆರ್‌ಡಿಎ (ಸ್ಥಳೀಯ ಯೋಜನಾ ಪ್ರಾಧಿಕಾರ) ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್ ಪ್ಲಾನಿಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.
4. ಭೂ ಪರಿವರ್ತನೆ ಕೋರಿರುವ ಜಮೀನಿನಲ್ಲಿ ಮೂಲಭೂತ ಸೌಕರ್ಯಗಳಿಗೆ ನಿಗದಿಪಡಿಸಲಾದ ಅಂದರೆ ರಸ್ತೆ ಜಾಗ, ರಸ್ತೆ ಮಾರ್ಜಿನ್, ಉದ್ಯಾನವನ, ದೇವಸ್ಥಾನ, ಸಿ.ಎ.ನಿವೇಶನ ಖಾಲಿ ಜಾಗ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ಧಿಷ್ಟಪಡಿಸಿದ ನಿಯಮಗಳ ರೀತ್ಯಾ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ, ಸಕ್ಷಮ ಪ್ರಾಧಿಕಾರಕ್ಕೆ ಪರಿತ್ಯಾಗ ಪತ್ರ (Relinquish Deed) ಮಾಡಿಕೊಡತಕ್ಕದ್ದು ಹಾಗೂ ಸ್ಥಳೀಯ ಯೋಜನಾ ಪ್ರಾಧಿಕಾರ ವಿಧಿಸಿರುವ ಷರತ್ತಿಗೊಳಪಟ್ಟಿರುತ್ತದೆ.
5. ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೆ ನಿವೇಶನಗಳನ್ನು/ಕಟ್ಟಡಗಳನ್ನು ನೊಂದಾವಣೆ ಮಾಡತಕ್ಕದ್ದಲ್ಲ, ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿಗೆ ಪೂರಾ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದಲ್ಲಿ ಈ ಆದೇಶ ಅಡ್ಡಿ ಬರುವುದಿಲ್ಲ.
6. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ನೀರು ಸರಬರಾಜು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯಾ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.
7. ಈ ಜಮೀನಿಗೆ ತಾಕು ಘೂಟ್ ಖರಾಬ್ ಜಮೀನಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ.67ರಂತೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು ಹಾಗೂ ತಹಶೀಲ್ದಾರ್‌ರವರು ಈ ಬಾಬ್ತು ಆರ್.ಟಿ.ಸಿ.ಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.
8. ಸರ್ಕಾರದ ಅದೇಶ ಸಂಖ್ಯೆ: ಪಿಡಬ್ಲ್ಯೂಡಿ: 7556-665 ಆರ್ ಮತ್ತು ಬಿ-6-54-5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ ಪಿ 1:7(11) 67, ದಿನಾಂಕ: 1.1.1966 ರಂತೆ ಸರ್ಕಾರವು ಕಾಲಕಾಲಕ್ಕೆ ನೀಡುವ ಆದೇಶದಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ, ರಸ್ತೆಯ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.
9. ಈ ಭೂ ಪರಿವರ್ತನಾ ಜಮೀನಿನಲ್ಲಿ ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳು ಹೊರದೂಡುವ ಹೊಗೆ, ಅನಿಲ, ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು. ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ / ಪರಿಸರ ಇಲಾಖೆಯ ಅನುಮತಿ ಹೊಂದಿರತಕ್ಕದ್ದು. ಹಾಗೂ ಸದರಿ ಜಮೀನು ಪೋಡಿ ದುರಸ್ತಿ ಪಡಿಸಿದ ನಂತರ ನಿವೇಶನಗಳನ್ನು ವಿಂಗಡಿಸತಕ್ಕದ್ದು.
10. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ/ರಿಟ್ ಅರ್ಜಿ/ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.
11. ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂ ಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.
12. ಪರಿಷ್ಕೃತ ಮಾಸ್ಟರ್ ಪ್ಲಾನ್ 2015ರಲ್ಲಿ ಸೂಕ್ಷ್ಮವಲಯ [Sensitive Zone] ನಲ್ಲಿ ಬರುವ ಪ್ರದೇಶಗಳಿಗೆ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ ಇವರಿಗೆ ಭೂ ಪರಿವರ್ತನೆ ಬಗ್ಗೆ ಮಾಹಿತಿ ನೀಡುವಾಗ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಉದ್ದೇಶಿತ ಭಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿಯನ್ನು ಕೈಗೊಳ್ಳಬಾರದು.
13. ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಬೇಕಾದಲ್ಲಿ ಪ್ರಾಧಿಕಾರದಿಂದ ರಚಿತವಾದ ಉಪಸಮಿತಿಯ ನಿರ್ಣಯದಂತೆ ನಕ್ಷೆಗಳನ್ನು ಅನುಮೋದಿಸಿಕೊಳ್ಳತಕ್ಕದ್ದು.
14. ಪ್ರಶ್ನಿತ ಜಮೀನು ಸರ್ಕಾರಿ ಜಮೀನು ವ್ಯಾಪ್ತಿಗೆ ಒಳಪಟ್ಟಲ್ಲಿ, ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 136 [3] ರ ಅಡಿ ವಿಚಾರಣೆ ನಡೆಸಿ ಹೊರಡಿಸುವ ತೀರ್ಮಾನಕ್ಕೆ ಒಳಪಟ್ಟಿರುತ್ತದೆ.
15. ಪ್ರಶ್ನಿತ ಜಮೀನು ಸರ್ಕಾರದಿಂದ ಮಂಜೂರಾದ ಯಾವುದೇ ಸರ್ಕಾರಿ ಜಮೀನಾಗಿದ್ದಲ್ಲಿ ಪಕ್ಕಾ ಪೋಡಿಯಾಗದ ಮತ್ತು ಪಕ್ಕಾ ಪೋಡಿ ಮಾಡಿಸಿಕೊಳ್ಳದೇ ತಪ್ಪು ಮಾಹಿತಿ ನೀಡಿ ಭೂ ಪರಿವರ್ತನೆ ಆದೇಶ ಪಡೆದಿದ್ದು ಕಂಡುಬಂದಲ್ಲಿ ಸದರಿ ಆದೇಶವನ್ನು ರದ್ದುಗೊಳಿಸಲಾಗುವುದು.

- - - 3)

16. ಅರ್ಜಿದಾರರು ಯಾವುದೇ ಸತ್ಯಾಂಶಗಳನ್ನು ಮರೆ ಮಾಚಿ, ಅನಧಿಕೃತ ದಾಖಲೆಗಳ ಮೇಲೆ ಈ ನೋಟೀಸ್ ಪಡೆದಿರುವುದು ಸತ್ಯಪಟ್ಟಲ್ಲಿ ಇನ್ನಾವುದೇ ತಿಳುವಳಿಕೆ ಇಲ್ಲದೆ ಈ ಅಧಿಕೃತ ಜ್ಞಾಪನ ತನ್‌ತಾನೇ ರದ್ದುಗೊಳ್ಳುತ್ತದೆ ಹಾಗೂ ಇದರಿಂದ ಅರ್ಜಿದಾರರಿಗಾಗಲೀ ಅಥವಾ ಅವರ ಉತ್ತರಾಧಿಕಾರಿಗಳಿಗಾಗಲೀ ಆಗುವ ಯಾವುದೇ ಲುಕ್ಸಾನಿಗೆ ಸರ್ಕಾರವಾಗಲೀ ಅಥವಾ ಈ ಪ್ರಾಧಿಕಾರವಾಗಲೀ ಯಾವುದೇ ರೀತಿಯ ಜವಾಬ್ದಾರರಾಗಿರುವುದಿಲ್ಲ. ಇದರ ಪೂರ್ಣ ಹೊಣೆಗಾರಿಕೆ ಅರ್ಜಿದಾರರದ್ದೇ ಆಗಿರುತ್ತದೆ.
17. ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶ ಯಾವುದೇ ಸೂಚನೆ ನೀಡದೆ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964ರ ಕಲಂ.96ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೆ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೆದಾರರಿಂದ ವಸೂಲಿ ಮಾಡಲಾಗುವುದು.
18. ಸಹಾಯಕ ಕಾರ್ಯಪಾಲಕ ಅಭಿಯಂತರರು, ನಗರ ಯೋಜನಾ ವಿಭಾಗ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರ ದಿನಾಂಕ: 29-05-2017ರ ಪತ್ರದಲ್ಲಿ ತಿಳಿಸಿರುವ ಷರತ್ತಿಗೊಳಪಟ್ಟಿರುತ್ತದೆ .
19. ಈ ಆದೇಶವು ರಾಷ್ಟ್ರೀಯ ಹಸಿರು ನ್ಯಾಯ ಮಂಡಳಿಯ ಮೂಲ ಅರ್ಜಿ ಸಂಖ್ಯೆ.222/2014, ದಿನಾಂಕ: 04-05-2016ರಂತೆ ಕೆರೆ, ಪ್ರೈಮರಿ, ಸೆಕೆಂಡರಿ, ಟರ್ಷರಿ ಡ್ರೈನ್‌ಗಳಿದ್ದಲ್ಲಿ ನಿಗದಿತ ಬಫರ್ ಬಿಡುವ & ಸದರಿ ಪ್ರದೇಶದಲ್ಲಿ ಅಭಿವೃದ್ಧಿ ಚಟುವಟಿಕೆಗಳನ್ನು ನಡೆಸಬಾರದೆಂಬ ಷರತ್ತಿಗೊಳಪಟ್ಟಿರುತ್ತದೆ.

**: : <u>ಷೆಡ್ಯೂಲ್ ವಿವರ</u> : :**

ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, **ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, ಮುಳ್ಳೂರು ಗ್ರಾಮದ ಸ.ನಂ.34/2ಎರಲ್ಲಿ 0-28 ಗುಂಟೆ & 0-30 ಗುಂಟೆ, ಮತ್ತು ಸ.ನಂ.34/2ಬಿ1 ರಲ್ಲಿ 1-04 ಎ/ಗು ಒಟ್ಟು 2-22 ಎ/ಗು** ವಿಸ್ತೀರ್ಣದ ವ್ಯವಸಾಯೇತರ **ವಾಸದ** ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿಗೆ ಚಕ್ಕುಬಂದಿ:-

**: : <u>ಚಕ್ಕುಬಂದಿ</u> : :**

| | **ಸ.ನಂ.34/2ಎ** | **ಸ.ನಂ.34/2ಬಿ1** |
|---|---|---|
| **ಪೂರ್ವಕ್ಕೆ:** | ಸ.ನಂ.34/2ಬಿ1,34/2ಬಿ2,34/3ರ ಜಮೀನು | ಸ.ನಂ.34/1&,34/2ಸಿರ ಜಮೀನು |
| **ಪಶ್ಚಿಮಕ್ಕೆ:** | ಸ.ನಂ.34/2ಎರ ಉಳಿಕೆ ಜಮೀನು | ಸ.ನಂ.34/2ಎರ ಜಮೀನು |
| **ಉತ್ತರಕ್ಕೆ:** | ಸ.ನಂ.52ರ ಜಮೀನು ಮತ್ತು ರಸ್ತೆ | ರಸ್ತೆ |
| **ದಕ್ಷಿಣಕ್ಕೆ:** | ಸ.ನಂ.34/2ಎರ ಉಳಿಕೆ ಜಮೀನು | ಸ.ನಂ.34/2ಬಿ!ರ ಜಮೀನು |

ಸಹಿ/-
**[ ವಿ.ಶಂಕರ್ ]**
ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

**<u>ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಿದೆ:-</u>**

1) ತಹಶೀಲ್ದಾರ್, ಬೆಂಗಳೂರು ಪೂರ್ವ ತಾಲ್ಲೂಕು, ಬೆಂಗಳೂರು ರವರಿಗೆ ಮೂಲ ಕಡತ ಹಾಗೂ ಚಲನ್‌ನೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಗಣಕೀಕೃತ ಆರ್.ಟಿ.ಸಿ.ಯಲ್ಲಿ ಕೂಡಲೇ ನಮೂದಿಸತಕ್ಕದ್ದು ಮತ್ತು ಈ ಜಮೀನಿಗೆ ಖಾತೆದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸುವುದು.
2) ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಟಿ.ಚೌಡಯ್ಯ ರಸ್ತೆ, ಕುಮಾರ್ ಪಾರ್ಕ್ ಪಶ್ಚಿಮ, ಬೆಂಗಳೂರು-560020 ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3) ಉಪವಿಭಾಗಾಧಿಕಾರಿಗಳು, ಬೆಂಗಳೂರು ಉತ್ತರ ಉಪ ವಿಭಾಗ, ಬೆಂಗಳೂರು.
4) ಉಪ ನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉತ್ತರ ಉಪ ವಿಭಾಗ, ಬೆಂಗಳೂರು ಇವರಿಗೆ ಆರ್.ಟಿ.ಸಿ. ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ, ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5) ಉಪ ನೋಂದಣಾಧಿಕಾರಿಗಳು, ವರ್ತೂರು ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು ಇವರಿಗೆ ಮಾಹಿತಿಗಾಗಿ.
6) ಅರ್ಜಿದಾರರಾದ **ಶ್ರೀ.ಬಸವರೆಡ್ಡಿ ಬಿನ್ ಲೇ.ವೆಂಕಟರಮಣಪ್ಪ, ನಂ.1286, 17ನೇ ಅಡ್ಡರಸ್ತೆ, 5ನೇ ಮುಖ್ಯರಸ್ತೆ, ಸಿಂಡಿಕೇಟ್ ಬ್ಯಾಂಕ್ ಹತ್ತಿರ, ಹೆಚ್.ಎಸ್.ಆರ್.ಲೇಔಟ್ ಸೆಕ್ಟರ್-7, ಬೆಂಗಳೂರು ದಕ್ಷಿಣ, ಬೆಂಗಳೂರು-560102** ರವರಿಗೆ ಮಾಹಿತಿಗಾಗಿ.
7) ಕಛೇರಿ ಪ್ರತಿ.

ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

**ಕರ್ನಾಟಕ ಸರ್ಕಾರ**

ನಂ:ಎಎಲ್‌ಎನ್/(ವ-2) ಪಿ ಎಸ್‌ಆರ್/ 136 /16-17

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು ದಿನಾಂಕ: 3-7-2017.

**:: ತಿಳುವಳಿಕೆ ಪತ್ರ ::**

ವಿಷಯ:- ಬೆಂಗಳೂರು ಜಿಲ್ಲೆ, ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, **ಮುಳ್ಳೂರು ಗ್ರಾಮದ ಸರ್ವೆ ನಂ.34/2ಎ ರಲ್ಲಿ 0-28 ಗುಂಟೆ & 0-30 ಗುಂಟೆ ಮತ್ತು ಸ.ನಂ.34/2ಬಿ1 ರಲ್ಲಿ 1-04 ಎಕರೆ/ಗುಂಟೆ ಒಟ್ಟು 2-22 ಎಕರೆ/ಗುಂಟೆ** ವಿಸ್ತೀರ್ಣದ ಜಮೀನನ್ನು ವ್ಯವಸಾಯೇತರ **ವಾಸದ** ಉದ್ದೇಶಕ್ಕಾಗಿ ಭೂ ಪರಿವರ್ತನೆ ಮಂಜೂರು ಮಾಡುವ ಬಗ್ಗೆ.

ಉಲ್ಲೇಖ: ತಹಶೀಲ್ದಾರ್, ಬೆಂಗಳೂರು ಪೂರ್ವ ತಾಲ್ಲೂಕು ರವರ ಪತ್ರ ಸಂಖ್ಯೆ:ಎಎಲ್‌ಎನ್ (ಪ) ಸಿಆರ್ 116/16-17 ದಿನಾಂಕ 11-5-2017

ನೀವು ಭೂ ಪರಿವರ್ತನೆ ಕೋರಿ ಬೆಂಗಳೂರು ಪೂರ್ವ ತಾಲ್ಲೂಕು, ವರ್ತೂರು ಹೋಬಳಿ, **ಮುಳ್ಳೂರು ಗ್ರಾಮದ ಸರ್ವೆ ನಂ.34/2ಎ ರಲ್ಲಿ 0-28 ಗುಂಟೆ & 0-30 ಗುಂಟೆ ಮತ್ತು ಸ.ನಂ.34/2ಬಿ1 ರಲ್ಲಿನ 1-04 ಎಕರೆ/ಗುಂಟೆ ಒಟ್ಟು 2-22 ಎಕರೆ/ಗುಂಟೆ** ವಿಸ್ತೀರ್ಣದ ಜಮೀನನ್ನು ವ್ಯವಸಾಯೇತರ **ವಾಸದ** ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ ಸಲ್ಲಿಸಿರುವ ಅರ್ಜಿಯನ್ನು ಪರಿಶೀಲಿಸಲಾಗಿದೆ ಹಾಗೂ ಈ ಬಾಬ್ತು ಈ ಕೆಳಗೆ ನಮೂದಿಸಿರುವ ಭೂ ಪರಿವರ್ತನಾ ಶುಲ್ಕವನ್ನು ಮತ್ತು ಪೋಡಿ ಶುಲ್ಕವನ್ನು ಸರ್ಕಾರಕ್ಕೆ ಜಮಾ ಮಾಡಿ ಈ ತಿಳುವಳಿಕೆ ಪತ್ರದೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ರೂ. 100-00 (ರೂಪಾಯಿ ಒಂದು ನೂರು ಮಾತ್ರ) ಛಾಪಾ ಕಾಗದದಲ್ಲಿ ಕರಾರು ಪತ್ರದೊಂದಿಗೆ ಚಲನ್/ಡಿಡಿ ಅನ್ನು 15 ದಿವಸದೊಳಗಾಗಿ ಹಾಜರುಪಡಿಸುವುದು.

2)ಅಂತಿಮವಾಗಿ ಅಧಿಕೃತ ಜ್ಞಾಪನ ನೀಡುವವರೆಗೆ ಭೂ ಪರಿವರ್ತನೆ ಬಗ್ಗೆ ಈ ನೋಟೀಸು ಯಾವುದೇ ಹಕ್ಕನ್ನು ನೀಡುವುದೆಂದು ಭಾವಿಸತಕ್ಕದ್ದಲ್ಲ.

3)ಭೂ ಪರಿವರ್ತನೆ ಕೋರಿರುವ ಜಮೀನು ಮಂಜೂರಾದ ಸರ್ಕಾರಿ ಜಮೀನಾಗಿದ್ದಲ್ಲಿ ಭೂ ಪರಿವರ್ತನಾ ಶುಲ್ಕ ಪಾವತಿಸುವುದಕ್ಕೆ ಮುಂಚಿತವಾಗಿ ಈ ನೋಟೀಸು ತಲುಪಿದ 7 ದಿನಗಳೊಳಗಾಗಿ ಭೂ ಮಂಜೂರಾತಿ ಆದ ಬಗ್ಗೆ ದೃಢೀಕೃತ ದಾಖಲೆಗಳನ್ನು ಈ ಕಛೇರಿಗೆ ಹಾಜರುಪಡಿಸಿ ಸ್ವೀಕೃತಿ ಪತ್ರ ಪಡೆಯತಕ್ಕದ್ದು.

4)ಭೂ ಪರಿವರ್ತನೆಗೆ ಕೋರಿರುವ ಜಮೀನು ಮಂಜೂರಾದ ಸರ್ಕಾರಿ ಜಮೀನಾಗಿದ್ದಲ್ಲಿ ತಕ್ಷಣವೇ ಪಕ್ಕಾ ಪೋಡಿ ಮಾಡಿಸಿಕೊಂಡು ದಾಖಲೆಗಳನ್ನು ಹಾಜರುಪಡಿತಕ್ಕದ್ದು.

5)ಅರ್ಜಿದಾರರು ಯಾವುದೇ ಸತ್ಯಾಂಶಗಳನ್ನು ಮರೆ ಮಾಚಿ, ಅನಧಿಕೃತ ದಾಖಲೆಗಳ ಮೇಲೆ ಈ ನೋಟೀಸು ಪಡೆದಿರುವುದು ಸ್ಪಷ್ಟಪಟ್ಟಲ್ಲಿ ಇನ್ನಾವುದೇ ತಿಳುವಳಿಕೆ ಇಲ್ಲದೆ ಈ ನೋಟೀಸು ತನ್‌ತಾನೇ ರದ್ದುಗೊಳ್ಳುತ್ತದೆ ಹಾಗೂ ಇದರಿಂದ ಅರ್ಜಿದಾರರಿಗಾಗಲೀ ಅಥವಾ ಅವರ ಉತ್ತರಾಧಿಕಾರಿಗಳಿಗಾಗಲೀ ಆಗುವ ಯಾವುದೇ ಲುಕ್ಸಾನಿಗೆ ಸರ್ಕಾರವಾಗಲೀ ಅಥವಾ ಈ ಪ್ರಾಧಿಕಾರವಾಗಲೀ ಯಾವುದೇ ರೀತಿಯ ಜವಾಬ್ದಾರರಾಗಿರುವುದಿಲ್ಲ. ಇದರ ಪೂರ್ಣ ಹೊಣೆಗಾರಿಕೆ ಅರ್ಜಿದಾರರದ್ದೇ ಆಗಿರುತ್ತದೆ.

6)ನಿಗದಿಪಡಿಸಿದ ಅವಧಿಯಲ್ಲಿ ಭೂ ಪರಿವರ್ತನೆ ಶುಲ್ಕ ಪಾವತಿಸಿದ ಬಗ್ಗೆ ಚಲನ್/ಡಿಡಿ ಮತ್ತು ಕರಾರು ಪತ್ರ, ಅನುಮೋದನೆ ಪತ್ರ, ಹಾಜರುಪಡಿಸದಿದ್ದಲ್ಲಿ ನಿಮ್ಮ ಅರ್ಜಿಯನ್ನು ತಿರಸ್ಕರಿಸಲಾಗುವುದು.

| ಸರ್ವೆ ನಂಬರ್ | ವಿಸ್ತೀರ್ಣ ಎಕರೆ/ಗುಂಟೆ | ಹಣ ಪಾವತಿ ವಿವರ | ಮೊಬಲಗು ರೂ. ಪೈಸೆ |
|---|---|---|---|
| 34/2ಎ<br>-<br>34/2ಬಿ1 | 0-28<br>0-30<br>1-04 | 1) ಭೂ ಪರಿವರ್ತನಾ ಶುಲ್ಕ ಎಕರೆ ಒಂದಕ್ಕೆ ವಾಸದ ಉದ್ದೇಶಕ್ಕೆ ರೂ.54,450-00 ರಂತೆ<br>2) ಪೋಡಿ ಶುಲ್ಕ ರೂ. 55-00 ರಂತೆ. | 1,38,848-00<br>110-00 |
| ಒಟ್ಟು | 2-22 | | **1,38,958-00** |

( ಒಂದು ಲಕ್ಷದ ಮೂವತ್ತೆಂಟು ಸಾವಿರದ ಒಂಬೈನೂರಾ ಐವತ್ತೆಂಟು ರೂಪಾಯಿಗಳು ಮಾತ್ರ)

ಜಿಲ್ಲಾಧಿಕಾರಿಗಳ ಪರವಾಗಿ,
ಬೆಂಗಳೂರು ಜಿಲ್ಲೆ, ಬೆಂಗಳೂರು.

ಶ್ರೀ ಬಸವರೆಡ್ಡಿ ಬಿನ್ ಲೇ ವೆಂಕಟರಮಣಪ್ಪ
ನಂ.1286, 17ನೇ ಅಡ್ಡರಸ್ತೆ, 5ನೇ ಮುಖ್ಯರಸ್ತೆ,
ಸಿಂಡಿಕೇಟ್ ಬ್ಯಾಂಕ್ ಹತ್ತಿರ,
ಹೆಚ್.ಎಸ್.ಆರ್. ಲೇಔಟ್ ಸೆಕ್ಟರ್-7,
ಬೆಂಗಳೂರು ದಕ್ಷಿಣ ತಾಲ್ಲೂಕು.